**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ7(8)ಆರ್.ಟಿ.ಇ ಪ್ರ.ಪ್ರ /18-19/2017-18 ದಿನಾಂಕ:07.02.2018

**: : ಸುತ್ತೋಲೆ : :**

ವಿಷಯ:- 2018-19 ನೇ ಸಾಲಿನಲ್ಲಿ ಅನುದಾನಿತ ಶಾಲೆಗಳಲ್ಲಿ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1)(ಬಿ) ಅಡಿ ಪ್ರವೇಶ ಪ್ರಕ್ರಿಯೆ ಬಗ್ಗೆ.

ಉಲ್ಲೇಖ:- 1. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ-2009.
2. ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012.
3. ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:16-12-2017.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಪಿಜಿಸಿ 2018 ದಿನಾಂಕ:23-1-2018.
5. ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:27-01-2018.

********

ಸರ್ಕಾರದ ಆದೇಶ ಸಂಖ್ಯೆ:ಇಡಿ 36 ಪಿಜಿಸಿ 2018 ದಿನಾಂಕ:23-1-2018 ರಲ್ಲಿ 2018-19ನೇ ಸಾಲಿನಲ್ಲಿ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1)(ಬಿ)ಅಡಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲೂ ಸಹ ಅನಾನೂಕೂಲ ಪರಿಸ್ಥಿತಿಯಲ್ಲಿರುವ ಮತ್ತು ದುರ್ಬಲ ವರ್ಗದ ಮಕ್ಕಳಿಗೆ ಪ್ರವೇಶ ನೀಡಲು ಆದೇಶಿಸಲಾಗಿದೆ. ಪ್ರತಿಯನ್ನು www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ. ಅದರಂತೆ ಶಾಲಾವಾರು ಸೀಟು ಹಂಚಿಕೆ ಮತ್ತು ಪ್ರವೇಶ ಪ್ರಕ್ರಿಯೆಯನ್ನು ತಂತ್ರಾಂಶದ ಮೂಲಕ ನಿರ್ವಹಿಸಲಾಗುವುದು. ಈ ಬಗ್ಗೆ ತಂತ್ರಾಂಶವನ್ನು ಶಾಲಾ ಮುಖ್ಯಸ್ಥರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದ್ದು, ತುರ್ತಾಗಿ ಕ್ರಮ ತೆಗೆದುಕೊಳ್ಳ ತಿಳಿಸಿದೆ.

ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಕಾಯಿದೆಯ ಸೆಕ್ಷನ್12(1)(ಬಿ) ಪ್ರಕಾರ ಉಚಿತ ಸೀಟುಗಳ ಶೇಕಡ ಸಂಖ್ಯೆಯನ್ನು ಸದರಿ ಶಾಲೆ ಸರ್ಕಾರದಿಂದ 2016-17ನೇ ಆರ್ಥಿಕ ವರ್ಷದಲ್ಲಿ ಪಡೆದ ಒಟ್ಟು ಅನುದಾನದ ಮೊತ್ತವನ್ನು ಸದರಿ ಶಾಲೆ ಆರ್ಥಿಕ ವರ್ಷದ ಆಡಿಟ್ ವರದಿಯಲ್ಲಿ ನಮೂದಿಸಿರುವ ಒಟ್ಟು ಆವರ್ತಕ ವೆಚ್ಚದ ಆಧಾರ ನಿಗಧಿಪಡಿಸಲಾಗುವುದು. ಅಂದರೆ ಅನುದಾನಿತ ಪ್ರಾಥಮಿಕ ಶಾಲೆ ಸರ್ಕಾರದಿಂದ ಪಡೆದ ಅನುದಾನದ ಅನುಪಾತಕ್ಕೆ ಅನುಗುಣವಾಗಿ ಕಾಯಿದೆಯ ಸೆಕ್ಷನ್ 12(1)(ಬಿ)ಅಡಿ ಮೀಸಲಿಡಬೇಕಾದ ಸೀಟುಗಳ ಸಂಖ್ಯೆಯನ್ನು ಶಾಲಾವಾರು ನಿಗದಿಪಡಿಸಲಾಗುವುದು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಿಸಿದ ಎಲ್ಲಾ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳ ಆಡಳಿತ ಮಂಡಳಿಗಳಿಗೆ ಸುತ್ತೋಲೆಯನ್ನು ತಲುಪಿಸುವುದು. ಜೊತೆಗೆ ಅಂತಹ ಎಲ್ಲಾ ಶಾಲೆಗಳ ಮೊಬೈಲ್ ಸಂಖ್ಯೆ ಮತ್ತು ಸಂಬಂಧಿಸಿದ (Authorised)ವ್ಯಕ್ತಿಯ ಇ-ಮೇಲ್ ವಿಳಾಸವನ್ನು ಸಂಗ್ರಹಿಸಿ, ತಾಲ್ಲೂಕುವಾರು ಕ್ರೋಢಿಕರಿಸಿ ಉಪನಿರ್ದೇಶಕರು(ಆಡಳಿತ) ಇವರಿಗೆ ಸಲ್ಲಿಸುವುದು. ಉಪನಿರ್ದೇಶಕರು(ಆಡಳಿತ) ಇವರು ಜಿಲ್ಲೆಯ ಎಲ್ಲಾ ಅನುದಾನಿತ ಪ್ರಾಥಮಿಕ ಶಾಲೆಗಳ ದೂರವಾಣಿ ಸಂಖ್ಯೆ ಮತ್ತು ಇ-ಮೇಲ್ ವಿಳಾಸವನ್ನು ತಾಲ್ಲೂಕುವಾರು ಕ್ರೋಢಿಕರಿಸಿ ಇ-ಮೇಲ್ ವಿಳಾಸ: rtektk@gmail.com ಕ್ಕೆ ದಿನಾಂಕ: 12.02.2018 ರೊಳಗೆ ಮೇಲ್ ಮಾಡುವುದು.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ರವರಿಗೆ,

(1) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
(2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ.
(3) ರಾಜ್ಯದ ಎಲ್ಲಾ ಖಾಸಗಿ ಅನುದಾನಿತ ಶಾಲೆಗಳ ಆಡಳಿತ ಮಂಡಳಿಗಳಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಸೂಕ್ತ ಕ್ರಮಕ್ಕಾಗಿ.
(4) ಕಛೇರಿ ಪ್ರತಿ.